**ಸಿ ಸಿ ನಂ. 517/2021**

**ಪಿಡಬ್ಲ್ಯು - 1 ಕೆ ಪಿ ಪುಷ್ಪಲತಾ**

**ದಿನಾಂಕ ಃ 26-12-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಿರ್ಯಾದಿ ಮುಖ್ಯ ವಿಚಾರಣೆ - ಶ್ರೀಮತಿ. ಸಿ ಬಿ ಎ ಪಿರ್ಯಾದಿ ಪರ ವಕೀಲರಿಂದಃ**

ನಾನು ಪಿರ್ಯಾದಿ ಬ್ಯಾಂಕ್ ವ್ಯವಸ್ಥಾಪಕಳಾಗಿರುತ್ತೇನೆ. ಬ್ಯಾಂಕ್‌ನ ಪರವಾಗಿ ಈ ಪ್ರಕರಣದಲ್ಲಿ ಸಾಕ್ಷ್ಯ ನೀಡಲು ನನಗೆ ಅಧಿಕಾರ ಪತ್ರವನ್ನು ನೀಡಿರುತ್ತಾರೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದನ್ನು ನನ್ನ ಮಾಹಿತಿಯ ಮೇರೆಗೆ ನನ್ನ ವಕೀಲರು ತಯಾರಿಸಿದ್ದು ಅದರಲ್ಲಿರುವ ಸಂಗತಿಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ನನ್ನ ಸಹಿಗಳನ್ನು ಹಾಕಿರುತ್ತೇನೆ. ಈ ಕೆಳಗಿನ ದಾಖಲೆಗಳನ್ನು ನಿಶಾನೆಗಳಾಗಿ ಹಾಜರುಪಡಿಸಿರುತ್ತೇನೆ.

ನೋಟರಿ ದೃಢೀಕೃತ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ1 ಎಂದು, ಆರೋಪಿ ನೀಡಿದ ಒಂದು ಚೆಕ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಮತ್ತು ಆರೋಪಿಯ ಸಹಿಯನ್ನು ನಿಪಿ-2(ಎ) ಎಂದು, ಬ್ಯಾಂಕ್‌ನವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಆರೋಪಿಗೆ ವಕೀಲರ ಮುಖಾಂತರ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ4, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು

ಅದನ್ನು ನಿಪಿ-5 ಎಂದು, ಸದರಿ ನೋಟಿಸ್ '' Addressee not known '' ಎನ್ನುವ ಷರಾದೊಂದಿಗೆ ಹಿಂತಿರುಗಿ ಬಂದಿದ್ದು, ಸದರಿ ನೋಟಿಸ್ ನ ಅಂಚೆ ಲಕೋಟೆಯನ್ನು ನಿಪಿ6 ಎಂದು, ಸದರಿ ಲಕೋಟೆಯನ್ನು ತೆಗೆದು ನೋಡಲಾಗಿ ಅದರಲ್ಲಿರುವ ನೋಟಿಸಿನ ಪ್ರತಿಯನ್ನು ನಿಪಿ6(ಎ) ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿಯ ವಿರುದ್ಧ ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಪ್ರಾರ್ಥನೆ.

ಆರೋಪಿ ಪರ ವಕೀಲರು ಪಾಟಿ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯವಕಾಶ ನೀಡಿ ಮುಂದೂಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

ಸಹಿ/-
(ಸಂತೋಷ ಕೊಠಾರಿ )
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ವಿರಾಜಪೇಟೆ